ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಗ್ರಾಮ ಪಂಚಾಯತಿಗಳಿಂದ ಮನೆ ಹಂಚಿಕೆ ಮಾಡುವ ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

05 (15) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ -

(ಅ) ಶ್ರವಣಬೆಳಗೊಳ ವಿಧಾನ ಸಭಾ ಕ್ಷೇತ್ರದಲ್ಲಿ ಪ್ರತಿ ಗ್ರಾಮ ಪಂಚಾಯತಿಗೆ 20 ಮನೆಗಳನ್ನು ಹಂಚಿಕೆ ಮಾಡುವ ಪ್ರಕ್ರಿಯೆಗೆ ಕ್ಷೇತ್ರದ ಶಾಸಕರ ಅಭಿಪ್ರಾಯ ಪಡೆಯದೆ ಫಲಾನುಭವಿಗಳನ್ನು ಆಯ್ಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು; ಹಾಗೂ ಆಯ್ಕೆ ಪ್ರಕ್ರಿಯೆ ನಡವಳಿಯೊಂದಿಗೆ ಫಲಾನುಭವಿಗಳ ಪಟ್ಟಿಯನ್ನು ಒದಗಿಸುವುದು;

(ಆ) ಸರ್ಕಾರದ ಮಾರ್ಗಸೂಚಿಯಂತೆ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಲಾಗಿದೆಯೇ; ಹೌದಾದಲ್ಲಿ ಮೀಸಲಾತಿಯಂತೆ ಆಯ್ಕೆ ಮಾಡಿರುವ ಫಲಾನುಭವಿಗಳ ಪಟ್ಟಿಯನ್ನು ಒದಗಿಸುವುದು; ಇಲ್ಲವಾದಲ್ಲಿ ಆಯ್ಕೆ ಮಾಡಿರುವ ಫಲಾನುಭವಿಗಳ ಪಟ್ಟಿಯನ್ನು ಬದಲಾವಣೆ ಮಾಡಲಾಗುವುದೇ; (ಗ್ರಾಮ ಪಂಚಾಯತಿವಾರು ಮಾಹಿತಿ ನೀಡುವುದು)

(ಇ) ಈ ಫಲಾನುಭವಿಗಳ ಪಟ್ಟಿಯನ್ನು ಆಯ್ಕೆ ಮಾಡಲು ಗ್ರಾಮ ಪಂಚಾಯತಿಗಳಿಗೆ ನೇಮಿಸಿರುವ ಆಡಳಿತಾಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಸಭೆಯನ್ನು ಕರೆಯಬಹುದೇ; ಮತ್ತು ಈ ಫಲಾನುಭವಿಗಳ ಪಟ್ಟಿಯನ್ನು ಗ್ರಾಮ ಸಭೆಯಲ್ಲಿ ಆಯ್ಕೆ ಮಾಡದೆ ಗ್ರಾಮ ಪಂಚಾಯಿತಿಗಳಿಗೆ ನೇಮಿಸಿರುವ ಆಡಳಿತಾಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅನುಮೋದಿಸಬಹುದೇ? (ವಿವರ ನೀಡುವುದು)